ಶ್ರೀ ಗುರಾಪಾದಪ್ಪ ನಾಗಮಾರಪಲ್ಲಿ (ಅರಣ್ಯ ಸಚಿವರು) :

1. ಮಾಗಡಿ ತಾಲ್ಲೂಕು ಮೂಡಬಾಳ್ ಹೋಬಳಿ ವೈ.ಜಿ. ಗುಡ್ಡೆ ಕೆರೆಯ ಪ್ರದೇಶದಲ್ಲಿ ಬರುವ ಅರಣ್ಯ ಪ್ರದೇಶದಲ್ಲಿನ ಕಲ್ಲುಗಳನ್ನು ಅನಧಿಕೃತವಾಗಿ ಸಾಗಿಸುತ್ತಿರುವುದು ಕಂಡುಬಂದಿಲ್ಲ.

2. ಅನಧಿಕೃತ ಕಲ್ಲು ಸಾಗಾಣಿಕೆ ಇಲ್ಲದಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಮಾಗಡಿ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳು.

1785 - ಶ್ರೀ ಹೆಚ್. ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ಸಂಖ್ಯೆ ಎಷ್ಟು ? (ಪ್ರಾಥಮಿಕ ಆರೋಗ್ಯ ಕೇಂದ್ರವಾರುಗಳಲ್ಲಿ ಖಾಲಿ ಇರುವ ಹುದ್ದೆಯ ಪೆಟ್ಟಿ ನೀಡುವುದು?

ಆ) ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಇ) ಈ ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಇದ್ದಕ್ಕೆ ಸರ್ಕಾರದ ಕ್ರಮವೇನು?

ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹುದ್ದೆ ಖಾಲಿ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಮಾಗಡಿ ತಾಲ್ಲೂಕಿನ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆ.

1786 - ಶ್ರೀ ಹೆಚ್. ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕಿನ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಒಟ್ಟು ಹುದ್ದೆಗಳೆಷ್ಟು? (ಶಾಲಾವಾರು ಖಾಲಿ ಇರುವ ಶಿಕ್ಷಕರ ಸಂಖ್ಯೆ ನೀಡುವುದು)